## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ: ತಳವಾರ ಸಾಬಣ್ಣಾ ಇವರ ಶೂನ್ಯ ವೇಳೆ ಪ್ರಸ್ತಾಪಕ್ಕೆ ಸರ್ಕಾರದ ಉತ್ತರ. (ದಿ: 10/12/2025 ಕ್ರ.ಸಂ:1)

**ಪ್ರಶ್ನೆ:** 46 ನೇ ಸಂಸ್ಥಾಪನಾ ದಿನಾಚರಣೆ ಆಚರಿಸಿಕೊಂಡಿರುವ ಗುಲಬರ್ಗಾ ವಿಶ್ವವಿದ್ಯಾಲಯವು ಸಿಬ್ಬಂದಿಗಳ ಕೊರತೆ, ಮೂಲಭೂತ ಸೌಕರ್ಯ ಮತ್ತು ಹಣಕಾಸಿನ ಮುಗಟ್ಟು ಎದುರಿಸುತ್ತಿದೆ. "ಕಾಸಿಲ್ಲ! ಪಿಂಚಣಿ ಪಾವತಿಗೆ ಗುಲಬರ್ಗಾ ವಿಶ್ವವಿದ್ಯಾಲಯ ಪರದಾಟ' ಎಂಬ ಶೀರ್ಷಿಕೆಯಡಿ ಪ್ರಜಾವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿದೆ. ಸರಕಾರವು ನೀಡುತ್ತಿದ್ದ ಅನುದಾನ (ಬ್ಲಾಕ್ ಗ್ರಾಂಟ್) ಸ್ಥಗಿತಗೊಳಿಸಿರುವುದರಿಂದ ವಿಶ್ವವಿದ್ಯಾಲಯದ ನಿರ್ವಹಣೆಗೆ ತೀವ್ರ ತೊಂದರೆಯಾಗಿದೆ. ವಿಶ್ವವಿದ್ಯಾಲಯವು ಸುಮಾರು 60 ಕೋಟಿ ರೂಪಾಯಿ ಹಣವನ್ನು ಪಿಂಚಣಿ ರೂಪದಲ್ಲಿ ನಿವೃತ್ತ ಸಿಬ್ಬಂದಿಗೆ ಕೊಡಬೇಕಾಗಿದೆ. ಆಂತರಿಕ ಸಂಪನ್ಮೂಲದ ಕೊರತೆಯಾಗಿರುವುದರಿಂದ ಈ ಪಿಂಚಣಿ ಹಣ ಭರಿಸುವ ಸ್ಥಿತಿಯಲ್ಲಿ ಇಲ್ಲಾ. ಇದರಿಂದ ನಿವೃತ್ತ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿ ಆತಂಕದಲ್ಲಿ ಇದ್ದಾರೆ. ಇನ್ನು ದುರಾದೃಷ್ಟದ ವಿಷಯವೇನೆಂದರೆ ವಿಶ್ವವಿದ್ಯಾಲಯದ 206 ಬೋಧಕ ಹುದ್ದೆಗಳಲ್ಲಿ ಕೇವಲ 34 ಬೋಧಕರು ಕೆಲಸ ಮಾಡುತ್ತಿದ್ದಾರೆ. ಸುಮಾರು 172 ಬೋಧಕ ಹುದ್ದೆಗಳು ಖಾಲಿ ಇದೆ. ಒಟ್ಟು 16 ವಿಭಾಗಗಳಲ್ಲಿ ಒಬ್ಬರೂ ಬೋಧಕರೇ ಇಲ್ಲ. 150 ಬೋಧಕೇತರ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇನ್ನು 283 ಬೋಧಕೇತರ ಹುದ್ದೆಗಳು ಖಾಲಿ ಇವೆ. ವಿಶ್ವವಿದ್ಯಾಲಯದಲ್ಲಿ ಎರಡೂವರೆ ದಶಕದಿಂದ ಬೋಧಕ ಹುದ್ದೆಗಳ ನೇಮಕಾತಿ ಆಗಿರುವುದಿಲ್ಲ. ಇದರಿಂದ ಪಾಠಗಳನ್ನು ಸರಿಯಾಗಿ ನಡೆಸಲು ಸಾಧ್ಯವಾಗುತ್ತಿಲ್ಲ. ಆದಕಾರಣ, ವಿದ್ಯಾರ್ಥಿಗಳು ವಿಶ್ವವಿದ್ಯಾಲಯಕ್ಕೆ ಪ್ರವೇಶ ಪಡೆಯಲು ಹಿಂದೇಟು ಹಾಕುತ್ತಿದ್ದಾರೆ. ಇದರಿಂದ ವಿಶ್ವವಿದ್ಯಾಲಯದಲ್ಲಿ ಗುಣಮಟ್ಟದ ಶಿಕ್ಷಣ ಮತ್ತು ಸಂಶೋಧನಾ ಚಟುವಟಿಕೆಗಳು ಬಹುತೇಕ ಸ್ಥಗಿತಗೊಂಡಿವೆ. ಗುಲಬರ್ಗಾ ವಿಶ್ವವಿದ್ಯಾಲಯವು 371 (J) ಗೆ ಒಳಪಡುವುದರಿಂದ ಮಂಜೂರಾದ ಹುದ್ದೆಗಳನ್ನು ತುಂಬುವುದಕ್ಕೆ ನಿರ್ಬಂಧವಿಲ್ಲಾ. ಈ ಹಿನ್ನಲೆಯಲ್ಲಿ, ರಾಜ್ಯದ ಹಿಂದುಳಿದ ಭಾಗದಲ್ಲಿರುವ ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಬೋಧಕ ಹುದ್ದೆಗಳನ್ನು ತುಂಬಲು ಕ್ರಮವಹಿಸಿ, ನಿವೃತ್ತ ನೌಕರರ ಪಿಂಚಣಿಯ ಮೊತ್ತವನ್ನು ಸರಕಾರವೇ ಭರಿಸಲು ಕ್ರಮ ಕೈಗೊಂಡು ಕಲ್ಯಾಣ ಕರ್ನಾಟಕ ಭಾಗದ ಗುಲಬರ್ಗಾ ವಿಶ್ವವಿದ್ಯಾಲಯದ ಬೆಳವಣಿಗೆಗೆ ಸಹಕರಿಸುವ ಕುರಿತು.

**ಉತ್ತರ:**

ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ 2025-26ನೇ ಸಾಲಿನಲ್ಲಿ ಪಿಂಚಣಿಗಾಗಿ ರೂ. 48.61ಕೋಟಿ ಅನುದಾನದ ಅವಶ್ಯಕತೆ ಇದ್ದು, ಸರ್ಕಾರದಿಂದ 2025-26ನೇ ಸಾಲಿನ ಆಯವ್ಯಯದಲ್ಲಿ ರೂ.16.50ಕೋಟಿಗಳನ್ನು ಹಂಚಿಕೆ ಮಾಡಿದ್ದು, ಸಂಪೂರ್ಣ ಅನುದಾನ ರೂ.16.50ಕೋಟಿಗಳನ್ನು ನಾಲ್ಕು ತ್ರೈಮಾಸಿಕ ಕಂತುಗಳಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಬಿಡುಗಡೆಗೊಳಿಸಲಾಗಿದೆ.

ಪ್ರತಿ ಆಯವ್ಯಯದಲ್ಲಿ ಆರ್ಥಿಕ ಇಲಾಖೆಯು ವಿಶ್ವವಿದ್ಯಾಲಯಗಳ ವೇತನಕ್ಕಾಗಿ ಸಂಪೂರ್ಣ ಅನುದಾನವನ್ನು ಒದಗಿಸುತ್ತದೆ. ಪಿಂಚಣಿ ಸೌಲಭ್ಯಗಳಿಗಾಗಿ ಭಾಗಶ: ಅನುದಾನವನ್ನು ಮಾತ್ರ ಬಿಡುಗಡೆಗೊಳಿಸಲಾಗುತ್ತಿದೆ. ಪಿಂಚಣಿ ಸೌಲಭ್ಯಗಳಿಗಾಗಿ ಬಾಕಿ/ಹೆಚ್ಚುವರಿ ಅನುದಾನವನ್ನು ವಿಶ್ವವಿದ್ಯಾಲಯಗಳ ಆಂತರಿಕ ಸಂಪನ್ಮೂಲಗಳಿಂದ ಭರಿಸಬೇಕಾಗಿರುತ್ತದೆ.

2025-26ನೇ ಸಾಲಿಗೆ ಐದು ವಿಶ್ವವಿದ್ಯಾಲಯಗಳಿಗೆ ಹೆಚ್ಚುವರಿ ಪಿಂಚಣಿ ಅನುದಾನ ಒದಗಿಸುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಇದರಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಪಿಂಚಣಿ ಸೌಲಭ್ಯಗಳಿಗಾಗಿ ರೂ.16.50ಕೋಟಿ ಹೆಚ್ಚುವರಿ ಅನುದಾನ ಒದಗಿಸುವಂತೆ ಆರ್ಥಿಕ ಇಲಾಖೆಗೆ ಕೋರಲಾಗಿತ್ತು.

ಆರ್ಥಿಕ ಇಲಾಖೆಯು ಸಂಬಂಧಪಟ್ಟ ವಿಶ್ವವಿದ್ಯಾಲಯಗಳಿಂದ ಮಂಜೂರಾದ ಹುದ್ದೆ, ಹೆಚ್ಚುವರಿಯಾಗಿ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರು, ಹೊರಗುತ್ತಿಗೆ ನೌಕರರ ನಿರ್ವಹಣೆಗೆ ತಗಲುವ ವೆಚ್ಚ, ಹೆಚ್ಚುವರಿಯಾಗಿ ನೇಮಿಸಿಕೊಂಡಿರುವ ಹುದ್ದೆಗಳನ್ನು ಕೈಬಿಟ್ಟಿರುವ/ಕಡಿತಗೊಳಿಸಿರುವ ಮಾಹಿತಿ, ಪಿಂಚಣಿ ಪಾವತಿಸಲು ಮೀಸಲಿಡುವ ಅನುದಾನ, ಅಸಮಾನ ವೆಚ್ಚಗಳನ್ನು ತರ್ಕಬದ್ಧಗೊಳಿಸಿರುವ ಮತ್ತಿತರ ಅಂಶಗಳ ಬಗ್ಗೆ ದೃಢೀಕರಣವನ್ನು ಪಡೆದು ಸಲ್ಲಿಸುವಂತೆ ತಿಳಿಸಿರುತ್ತದೆ.

ಮುಂದುವರೆದು, ಇತರೆ ವಿಶ್ವವಿದ್ಯಾಲಯಗಳಿಗೂ ಸಹ ಪಿಂಚಣಿ ನೀಡಲು ಅನುದಾನದ ಕೊರತೆ ಉಂಟಾಗಿದ್ದು, ಹೆಚ್ಚುವರಿ ಮೊತ್ತವನ್ನು ಬಿಡುಗಡೆ ಮಾಡುವಂತೆ ಅಂಕಿ ಅಂಶಗಳ ವಿವರಗಳೊಂದಿಗೆ ಆರ್ಥಿಕ ಇಲಾಖೆಯೊಡನೆ ಹಲವಾರು ಸಭೆಗಳನ್ನು ನಡೆಸಿ ಚರ್ಚಿಸಲಾಗಿದ್ದು, ಈ ಕುರಿತು ಆರ್ಥಿಕ ಇಲಾಖೆಯ ತೀರ್ಮಾನವನ್ನು ನಿರೀಕ್ಷಿಸಲಾಗುತ್ತಿದೆ.

ಗುಲಬರ್ಗಾ ವಿಶ್ವವಿದ್ಯಾಲಯವನ್ನೂ ಒಳಗೊಂಡಂತೆ ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿ, ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನದಲ್ಲಿದ್ದು, ಪ್ರಸ್ತುತ ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಶ್ವವಿದ್ಯಾಲಯಗಳ ಸಂಶೋಧನೆ, ಮೂಲಸೌಲಭ್ಯ, ಅನುದಾನ, ಪಿಂಚಣಿ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಅನುಕೂಲವಾಗುವಂತೆ ಅಗತ್ಯ ಹುದ್ದೆಗಳ ನೇಮಕಾತಿ ಹಾಗೂ ಇತ್ಯಾದಿ ಅವಶ್ಯಕ ವಿಷಯಗಳ ಕುರಿತು ಹಲವು ಸಭೆಗಳನ್ನು ನಡೆಸಿದ್ದು, ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳ ಅಂಕಿ-ಅಂಶಗಳೊಂದಿಗಿನ ಸಂಪೂರ್ಣ ಚಿತ್ರಣವನ್ನು ಸಮಿತಿಗೆ ವಿವರಿಸಲಾಗಿದ್ದು, ಸಮಿತಿಯು ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಆಡಳಿತಾತ್ಮಕ/ಶೈಕ್ಷಣಿಕ/ಸಂಶೋಧನಾತ್ಮಕ/ಆರ್ಥಿಕವಾಗಿ ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಕಾರ್ಯಚರಣೆಯಲ್ಲಿರುತ್ತದೆ.

ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ 371(ಜೆ) ಹುದ್ದೆಗಳನ್ನೂ ಒಳಗೊಂಡಂತೆ ಎಲ್ಲಾ ಬೋಧಕ/ಬೋಧಕೇತರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಪ್ರಸ್ತುತ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿಯ ಒಳಮೀಸಲಾತಿಗೆ ಸಂಬಂಧಿಸಿದಂತೆ ಮೀಸಲಾತಿ ಬಿಂದುಗಳನ್ನು ಪರಿಷ್ಕರಿಸಿ ಹೊರಡಿಸಿರುವ ಸರ್ಕಾರದ ಆದೇಶ ಸಿಆಸುಇ 02 ಸೆಹಿಮ 2025, ದಿನಾಂಕ: 03.09.2025ರನ್ವಯ ವಿಶ್ವವಿದ್ಯಾಲಯವು ಮೀಸಲಾತಿ ಬಿಂದುಗಳನ್ನು ನಿಗದಿಪಡಿಸಿ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ವಿಶ್ವವಿದ್ಯಾಲಯಕ್ಕೆ ತಿಳಿಸಲಾಗಿದೆ.

ಕಡತ ಸಂಖ್ಯೆ: ಇಡಿ 151 ಹೆಚ್‌ಪಿಯು 2025

(ಡಾ: ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು